# ಕನ್ನಡ ಪೋಸ್ಟ್

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಸಂಪಾದಕ : ಮಂಜು ಬನವಾಸೆ

ಹಾಸನ | E-mail : kannadapostnews@gmail.com | f / ಕನ್ನಡ post | Price: ₹1

Vol.No.02 | Issue. 53 | Pages. 2 | Date: 24-01-2026, SATURDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 53 – ಪುಟಗಳು : 2 | 24-01-2026 | ಶನಿವಾರ | Ph: 8762954248 | ದರ : ₹1


# ಹಾಸನದಲ್ಲಿಂದು ಜೆಡಿಎಸ್ ಜನತಾ ಸಮಾವೇಶ

## ಕಾಂಗ್ರೆಸ್‌ಗೆ ಟಕ್ಕರ್ ಕೊಡಲು ದಳಪತಿಗಳ ಸಜ್ಜು | ಬೃಹತ್ ವೇದಿಕೆ ನಿರ್ಮಾಣ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜೆಡಿಎಸ್ ಪಕ್ಷದ ಬೆಳ್ಳಿ ಮಹೋತ್ಸವದ ಅಂಗವಾಗಿ ಹಾಗೂ ಮುಂಬರುವ ಸ್ಥಳೀಯ ಸಂಸ್ಥೆ ಚುನಾವಣೆಗಳಿಗೆ ಪಕ್ಷವನ್ನು ಅಣಿಗೊಳಿಸುವ ಉದ್ದೇಶದಿಂದ ನಗರದಲ್ಲಿ ಜ. 24ರ ಶನಿವಾರ ಜೆಡಿಎಸ್ ಬೃಹತ್ ಜನತಾ ಸಮಾವೇಶ ಹಮ್ಮಿಕೊಂಡಿದ್ದು, ಕಾಂಗ್ರೆಸ್‌ಗೆ ಟಕ್ಕರ್ ಕೊಡಲು ದಳಪತಿಗಳು ಸಜ್ಜಾಗಿದ್ದಾರೆ.

ನಗರದ ಬೂವನಹಳ್ಳಿ ಸಮೀಪದ ಹುಡಾ ಹೊಸ ಬಡಾವಣೆಯಲ್ಲಿ ಸಮಾವೇಶಕ್ಕಾಗಿ ಬೃಹತ್ ವೇದಿಕೆ ನಿರ್ಮಿಸಲಾಗಿದ್ದು, ನಗರ ಹಾಗೂ ಜಿಲ್ಲೆಯ ವಿವಿಧೆಡೆಗಳಿಂದ ಆಗಮಿಸುವ ಜನರಿಗೆ ಈಗಾಗಲೇ 1 ಲಕ್ಷ ಆಸನಗಳ ವ್ಯವಸ್ಥೆ ಮಾಡಲಾಗಿದೆ. ಹೆಚ್ಚುವರಿಯಾಗಿ 10 ಸಾವಿರ ಕುರ್ಚಿಗಳನ್ನು ಸಿದ್ಧಪಡಿಸಲಾಗಿದ್ದು, ಆಯೋಜಕರ ಪ್ರಕಾರ ಸುಮಾರು 1 ರಿಂದ ಒಂದೂವರೆ ಲಕ್ಷ ಮಂದಿ ಸಮಾವೇಶದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ.ಸಮಾವೇಶಕ್ಕೆ ಸ್ಥಳೀಯ ನಾಯಕರ ಜೊತೆಗೆ ರಾಜ್ಯದ ವಿವಿಧ ಭಾಗಗಳಿಂದ ಜೆಡಿಎಸ್ ಪ್ರಮುಖ ನಾಯಕರು ಆಗಮಿಸುವ ನಿರೀಕ್ಷೆ ಇದೆ.

ಸಮಾವೇಶದ ಕೇಂದ್ರ ಬಿಂದುವಾಗಿರುವ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು ಶನಿವಾರ ಬೆಳಿಗ್ಗೆ ಬೆಂಗಳೂರಿನಿಂದ ವಿಶೇಷ ಹೆಲಿಕಾಪ್ಟರ್ ಮೂಲಕ ತಮ್ಮ ಹುಟ್ಟೂರು ಹರದನಹಳ್ಳಿಗೆ ಆಗಮಿಸಿ, ಕುಲದೈವ ದೇವೇಶ್ವರನಿಗೆ ವಿಶೇಷ ಪೂಜೆ ಸಲ್ಲಿಸಿದ ಬಳಿಕ ಬೆಳಿಗ್ಗೆ 11 ಗಂಟೆ ಸುಮಾರಿಗೆ ಸಮಾವೇಶ ಸ್ಥಳಕ್ಕೆ ಆಗಮಿಸಲಿದ್ದಾರೆ.

ಮಾಜಿ ಸಚಿವ ಹೆಚ್ .ಡಿ.ರೇವಣ್ಣ, ಶಾಸಕ ಹೆಚ್.ಪಿ. ಸ್ವರೂಪ್, ಜೆಡಿಎಸ್ ಜಿಲ್ಲಾಧ್ಯಕ್ಷ ಕೆ.ಎಸ್. ಲಿಂಗೇಶ್ ಸೇರಿದಂತೆ ಪಕ್ಷದ ಮುಖಂಡರು ಬೆಳಗ್ಗಿನಿಂದಲೇ ಸಮಾವೇಶ ಸ್ಥಳದಲ್ಲಿ ಮೊಕ್ಕಾಂ ಹೂಡಿ ಸಿದ್ಧತೆಗಳ ಮೇಲ್ವಿಚಾರಣೆ ನಡೆಸಿದರು.

ವಿಧಾನಸಭೆ ಚುನಾವಣೆ ಬಳಿಕ ಜಿಲ್ಲೆಯಲ್ಲಿ ನಡೆಯುತ್ತಿರುವ ಜೆಡಿಎಸ್ ಬೃಹತ್ ಸಮಾವೇಶ ಹಿನ್ನೆಲೆಯಲ್ಲಿ ನಗರ ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ಬೃಹತ್ ಗಾತ್ರದ ಫ್ಲೆಕ್ಸ್, ಕಟೌಟ್‌ಗಳು ಹಾಗೂ ಜೆಡಿಎಸ್ ಬಾವುಟಗಳು ರಾರಾಜಿಸುತ್ತಿದ್ದು, ಸಮಾವೇಶದ ವಾತಾವರಣ ನಿರ್ಮಾಣಗೊಂಡಿದೆ.



### 1300ಕ್ಕೂ ಹೆಚ್ಚು ವಾಹನ

ಜಿಲ್ಲೆಯ ವಿವಿಧ ಭಾಗಗಳಿಂದ ಜನರನ್ನು ಕರೆತರುವ ಸಲುವಾಗಿ ಸುಮಾರು 1300ಕ್ಕೂ ಹೆಚ್ಚು ವಾಹನಗಳ ವ್ಯವಸ್ಥೆ ಮಾಡಲಾಗಿದೆ. ಇದರಲ್ಲಿ 950 ಕೆಎಸ್‌ಆರ್‌ಟಿಸಿ ಬಸ್‌ಗಳು ಹಾಗೂ 300 ಖಾಸಗಿ ಬಸ್‌ಗಳು ಸೇರಿವೆ.

ಸಮಾವೇಶದ ವೇಳೆ ಯಾವುದೇ ಅಹಿತಕರ ಘಟನೆ ನಡೆಯದಂತೆ ಶಾಂತಿಯುತವಾಗಿ ಕಾರ್ಯಕ್ರಮ ಮುಕ್ತಾಯಗೊಳಿಸಲು ಮುನ್ನೆಚ್ಚರಿಕೆ ವಹಿಸಲಾಗಿದ್ದು, ಅಧಿಕಾರಿಗಳು ಹಾಗೂ ಸಿಬ್ಬಂದಿ ಸೇರಿ ಒಟ್ಟು 1400ಕ್ಕೂ ಹೆಚ್ಚು ಪೊಲೀಸರನ್ನು ನಿಯೋಜಿಸಲಾಗಿದೆ. ಸಮಾವೇಶ ಸ್ಥಳದಲ್ಲೇ ಸಭೆ ನಡೆಸಿದ ಹಾಸನ ವಿಭಾಗದ ಡಿವೈಎಸ್ಪಿ ಗಂಗಾಧರಪ್ಪ, ಎಲ್ಲ ಅಧಿಕಾರಿಗಳಿಗೆ ಜವಾಬ್ದಾರಿ ಹಂಚಿಕೆ ಮಾಡಿ ಕಟ್ಟುನಿಟ್ಟಿನ ಮುನ್ನೆಚ್ಚರಿಕೆ ವಹಿಸುವಂತೆ ಸೂಚನೆ ನೀಡಿದರು.

> ನಂಬಿಕೆ ದ್ರೋಹಕ್ಕೆ ಮತ್ತೊಂದು ಹೆಸರು ಕಾಂಗ್ರೆಸ್. ಕನ್ಯಾಕುಮಾರಿಯಿಂದ ಕಾಶ್ಮೀರದ ವರೆಗೆ ಪಾದಯಾತ್ರೆ ನಡೆಸಿ ಪಕ್ಷ ಸಂಘಟಿಸಿದ್ದ ಚಂದ್ರಶೇಖರ್ ಅವರನ್ನು ಪ್ರಧಾನಿ ಹುದ್ದೆಯಿಂದ ಕೆಳಗಿಳಿಸಿದರು. ಚರಣ್ ಸಿಂಗ್ ಬಡ ರೈತನ ಮಗ ಎಂಬ ಕಾರಣಕ್ಕೆ ಅವರನ್ನು ಪ್ರಧಾನಿ ಕುರ್ಚಿ ಮೇಲೆ ಕೂರಲು ಬಿಡಲಿಲ್ಲ. ಹತ್ತೂವರೆ ತಿಂಗಳಿಗೆ ದೇವೇಗೌಡರಿಂದ ಅಧಿಕಾರ ಕಿತ್ತುಕೊಂಡರು. ಕಾಂಗ್ರೆಸ್ ದೇಶಾದ್ಯಂತ ನೆಲಕಚ್ಚಲು ಈ ರೀತಿಯ ದ್ರೋಹ ನೀತಿಯೇ ಕಾರಣ.
>
> **– ಹೆಚ್.ಡಿ.ರೇವಣ್ಣ, ಮಾಜಿ ಸಚಿವ**



## ಜಿಲ್ಲೆಯ ಜನರೊಂದಿಗೆ ನಾವಿದ್ದೇವೆ

ಹಾಸನ: ಅಭಿವೃದ್ಧಿ ಇಲ್ಲದೆ ಜಿಲ್ಲೆಯ ಜನರು ಕಣ್ಣೀರು ಹಾಕುತ್ತಿದ್ದಾರೆ. 94ರ ಇಳಿ ವಯಸ್ಸಿನಲ್ಲೂ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರು ಜನರೊಂದಿಗೆ ಇದ್ದೇನೆಂಬ ಸಂದೇಶ ಸಾರಲು ಶನಿವಾರ ಜನತಾ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಮಾಜಿ ಸಚಿವ ಹೆಚ್.ಡಿ.ರೇವಣ್ಣ ಹೇಳಿದರು.

ಶುಕ್ರವಾರ ಸುದ್ದಿಗೋಷ್ಟಿಯಲ್ಲಿ ಮಾತನಾಡಿ, ಪಕ್ಷಕ್ಕೆ 25 ವರ್ಷ ತುಂಬಿರುವ ಹಿನ್ನಲೆಯಲ್ಲಿ ಬೆಳ್ಳಿ ಹಬ್ಬವನ್ನು ಆಚರಿಸಲಾಗುತ್ತಿದೆ. 1962ರಿಂದ ರಾಜಕಾರಣದಲ್ಲಿರುವ ದೇವೇಗೌಡರು 63 ವರ್ಷಗಳಿಂದ ಜಿಲ್ಲೆ, ರಾಷ್ಟ್ರಕ್ಕೆ ತಮ್ಮದೇಯಾದ ಕೊಡುಗೆ ನೀಡಿದ್ದಾರೆ ಎಂದರು.

ಬೆಳಿಗ್ಗೆ 8.30ಕ್ಕೆ ವೇದಿಕೆ ಕಾರ್ಯಕ್ರಮ ಆರಂಭವಾಗಲಿದೆ. ಮಾಜಿ ಪ್ರಧಾನಿ ಹೆಚ್ .ಡಿ.ದೇವೇಗೌಡ ಅವರು ಹರದನಹಳ್ಳಿಯ ದೇವೇಶ್ವರ ದೇಗುಲದಲ್ಲಿ ವಿಶೇಷ ಪೂಜೆ ಸಲ್ಲಿಸಿ ನಂತರ ಬೆಳಿಗ್ಗೆ 11ಕ್ಕೆ ಹಾಸನಕ್ಕೆ ಆಗಮಿಸುತ್ತಾರೆಂದರು.

ಸಕಾಲಕ್ಕೆ ಬಿಲ್ ಪಾವತಿಯಾಗದೆ ಗುತ್ತಿಗೆದಾರರು ವಿಷ ಕುಡಿಯುವ ಪರಿಸ್ಥಿತಿಗೆ ಬಂದಿದ್ದಾರೆ. ಕಾಂಗ್ರೆಸ್‌ನ ದುರಾಡಳಿತಕ್ಕೆ ರಾಜ್ಯದ ಜನರು ಬೇಸತ್ತಿದ್ದಾರೆ.



ಜಿಲ್ಲೆಯ ಜನರೊಂದಿಗೆ ನಾವಿದ್ದೇವೆಂದು ಧೈರ್ಯ ತುಂಬಲು ಜನತಾ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಯಾರು ಯಾರ ಬೆನ್ನಿಗೆ ಚೂರಿ ಹಾಕಿದರು, ಯಾರು ಯಾರಿಗೆ ಟೋಪಿ ಹಾಕಿದ್ದಾರೆಂಬುದನ್ನು ಜ. 24ರ ಶನಿವಾರ ನಡೆಯುವ ಜನತಾ ಸಮಾವೇಶದಲ್ಲಿ ದಾಖಲೆ ಸಮೇತ ಜನರ ಮುಂದಿಡುತ್ತೇನೆಂದು ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅವರು ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದರು.

ಕಳೆದ ಎರಡೂವರೆ ವರ್ಷಗಳಿಂದ ಜಿಲ್ಲೆಗೆ ಅಭಿವೃದ್ಧಿ ಮರೀಚಿಕೆಯಾಗಿದೆ. ಶಿಕ್ಷಣ, ಆರೋಗ್ಯ, ಕೃಷಿ ಕ್ಷೇತ್ರಕ್ಕೆ ಕಾಂಗ್ರೆಸ್ ಸರ್ಕಾರದ ಕೊಡುಗೆ ಶೂನ್ಯ. ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಸರ್ಕಾರದ ಯೋಜನೆಗಳನ್ನು ತಡೆ ಹಿಡಿದಿದ್ದಾರೆ. ಕುಮಾರಸ್ವಾಮಿ ಸರ್ಕಾರದಲ್ಲಿ ಜಿಲ್ಲೆಯ ರೈತರ 520 ಕೋಟಿ ರೂ. ಸಾಲ ಮನ್ನಾ ಮಾಡಲಾಯಿತು. ಈ ಸರ್ಕಾರ ಏನು ಅಭಿವೃದ್ಧಿ ಮಾಡಿದೆಯೆಂದು ಪ್ರಶ್ನಿಸಿದರು.

ಹಾಸನ ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿದರೂ ಹೆಚ್ಚುವರಿ ಅನುದಾನ ನೀಡಿಲ್ಲ. ನೀರಾವರಿ ಯೋಜನೆಗಳಿಗೆ ತಡೆಯೊಡ್ಡಿದ್ದಾರೆ. ತೋಟಗಾರಿಕೆ ಕಾಲೇಜು ಮಾಡಬೇಕೆಂಬ ಮಹದಾಸೆಗೆ ಹಿಂದಿನ ಸರ್ಕಾರ ತಣ್ಣೀರೆರಚಿತು. ಕಳೆದ ಲೋಕಸಭೆ ಹಾಗು ಮಹಾನಗರ ಪಾಲಿಕೆ ಚುನಾವಣೆ ಹೇಗೆ ನಡೆಯಿತು ಎಂಬುದನ್ನು ಎಲ್ಲರೂ ನೋಡಿದ್ದಾರೆ. ಇವರ ಎಲ್ಲಾ ಆಟಾಟೋಪಗಳಿಗೆ ಶನಿವಾರದ ಸಮಾವೇಶದಲ್ಲಿ ಉತ್ತರ ನೀಡುತ್ತೇನೆಂದು ಆಕ್ರೋಶ ವ್ಯಕ್ತಪಡಿಸಿದರು.

ಮಹಾನಗರ ಪಾಲಿಕೆ ಮಾಜಿ ಮೇಯರ್ ಗಿರೀಶ್ ಚನ್ನವೀರಪ್ಪ, ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಸ್ವಾಮಿಗೌಡ ಮತ್ತಿತರರಿದ್ದರು.

### ಭರ್ಜರಿ ಊಟದ ವ್ಯವಸ್ಥೆ

ಸಮಾವೇಶದಲ್ಲಿ ಭಾಗವಹಿಸುವ ಎಲ್ಲರಿಗೂ ಊಟದ ವ್ಯವಸ್ಥೆ ಮಾಡಲಾಗಿದೆ. ಇದಕ್ಕಾಗಿ ನಾಲ್ಕು ಬೃಹತ್ ಊಟದ ಕೌಂಟರ್‌ಗಳನ್ನು ತೆರೆಯಲಾಗಿದ್ದು, ಸುಮಾರು 2 ಸಾವಿರ ಅಡುಗೆ ಭಟ್ಟರು ಹಾಗೂ ಸಹಾಯಕ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಒಂದೊಂದು ಕೌಂಟರ್‌ನಲ್ಲಿ ತಲಾ 20 ಸಾವಿರ ಮಂದಿ ಊಟ ಮಾಡುವಂತೆ ವ್ಯವಸ್ಥೆ ಮಾಡಲಾಗಿದೆ.



## ಮುರುಳಿ ಮೋಹನ್ ವಿರುದ್ಧ ಅಪಪ್ರಚಾರ ಸಲ್ಲದು: ಅನ್ನಪೂರ್ಣ ಶ್ರೀಶೈಲ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಕಾಂಗ್ರೆಸ್ ಪರಾಜಿತ ಅಭ್ಯರ್ಥಿ ಮುರುಳಿ ಮೋಹನ್ ವಿರುದ್ಧ ಸ್ವಪಕ್ಷೀಯ ಮುಖಂಡರೇ ಅಪಪ್ರಚಾರ ಮಾಡುತ್ತಿರುವುದು ಖಂಡನೀಯ ಎಂದು ತಾಲೂಕು ಕಾಂಗ್ರೆಸ್ ಮಹಿಳಾ ಘಟಕದ ಅಧ್ಯಕ್ಷೆ ಅನ್ನಪೂರ್ಣ ಶ್ರೀಶೈಲ ಹೇಳಿದರು.

ಸುದ್ದಿಗೋಷ್ಟಿಯಲ್ಲಿ ಶುಕ್ರವಾರ ಮಾತನಾಡಿ, ಜ. 16ರಂದು ನಡೆದ ಜನಸ್ಪಂದನ ಕಾರ್ಯಕ್ರಮವುಯಶಸ್ವಿಯಾಗಿ ನಡೆಯಿತು. ಸಂಜೆ ವೇಳೆಗೆ ಶಿಷ್ಟಾಚಾರದಂತೆ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಮುರುಳಿ ಮೋಹನ್ ಅವರು ಸಹ ಭಾಗವಹಿಸಿದ್ದರು. ಆದರೆ ಇದನ್ನು ಸಹಿಸದ ಸಣ್ಣಸ್ವಾಮಿ ವಿನಾಕಾರಣ ಗೊಂದಲ ಸೃಷ್ಟಿ ಮಾಡಲು ಯತ್ನಿಸಿದರು. ಆ ಸಂದರ್ಭದಲ್ಲಿ ಪರಿಸ್ಥಿತಿ ಗಂಭೀರವಾಗದಂತೆ ನೋಡಿಕೊಳ್ಳಲು ಪೊಲೀಸರು ಸಣ್ಣಸ್ವಾಮಿಯವರನ್ನು ಹೊರಗೆ ಕರೆದುಕೊಂಡು ಹೋದರು. ಅಲ್ಲಿ ಯಾವುದೇ ಹಲ್ಲೆ ಅಥವಾ ಅಶಾಂತಿ ನಡೆದಿಲ್ಲ. ಆದರೂ ಸಣ್ಣಸ್ವಾಮಿ ಅವರು ಈ ವಿಷಯವನ್ನು ದೊಡ್ಡದಾಗಿ ಬಿಂಬಿಸಿ, ಕಾಂಗ್ರೆಸ್ ಪಕ್ಷದ ಹಾಗೂ ಮುರಳಿ ಮೋಹನ್ ಅವರ ಗೌರವಕ್ಕೆ ಧಕ್ಕೆ ತರುವ ಉದ್ದೇಶದಿಂದ ಸುಳ್ಳು ಆರೋಪಗಳನ್ನು ಮಾಡುತ್ತಿದ್ದಾರೆ ಎಂದರು.

### ಪಕ್ಷ ಸಂಘಟನೆಯಲ್ಲಿ ಸಣ್ಣಸ್ವಾಮಿ ವಿಫಲ

ಕಾಂಗ್ರೆಸ್ ಮುಖಂಡ ಡಿ.ಸಿ ಸಣ್ಣಸ್ವಾಮಿರವರು ಹಲವು ವರ್ಷಗಳಿಂದ ಪಕ್ಷದಲ್ಲಿ ಗುರುತಿಸಿಕೊಂಡಿದ್ದರು ಸಹ ಕ್ಷೇತ್ರದಲ್ಲಿ ಪಕ್ಷವನ್ನು ಪ್ರಬಲವಾಗಿ ಕಟ್ಟಲು ವಿಫಲರಾಗಿದ್ದಾರೆ. ಆದರೆ ಮುರುಳಿಮೋಹನ್ ಕಳೆದ ವಿಧಾನಸಭಾ ಚುನಾವಣೆಯಲ್ಲಿ ಪರಾಜಿತರಾದರು ಸಹ ಕ್ಷೇತ್ರದಲ್ಲೇ ಇದ್ದು ಪಕ್ಷವನ್ನು ಸದೃಡಗೊಳಿಸುತ್ತಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡರ ಸಭೆಗೆ ಸಣ್ಣಸ್ವಾಮಿ ಅವರಿಗೆ ಅವಕಾಶ ಇಲ್ಲದಿದ್ದರೂ ಸಭೆಗೆ ಹೋಗಲು ಮುಂದಾಗಿರುವುದು ಎಷ್ಟು ಸರಿ. ಅವರಿಗೆ ಕ್ಷೇತ್ರದಲ್ಲಿ ಕಾಂಗ್ರೆಸ್ ಸದೃಡಗೊಳ್ಳುವುದು ಇಷ್ಟವಿಲ್ಲ ಎಂದರು.

ಬಾಳ್ಳುಪೇಟೆ ಗ್ರಾ.ಪಂ. ಮಾಜಿ ಅಧ್ಯಕ್ಷೆ ಗೌರಮ್ಮ ಮಾತನಾಡಿ, ಮುರುಳಿ ಮೋಹನ್ ಅವರು ಕ್ಷೇತ್ರದಲ್ಲಿದ್ದು ಮುಂಬರುವ ಜಿ.ಪಂ., ತಾ.ಪಂ. ಹಾಗೂ ಗ್ರಾ.ಪಂ ಚುನಾವಣೆಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಗೆಲ್ಲಿಸಲು ಪಕ್ಷವನ್ನು ಕಟ್ಟಲು ಯತ್ನಿಸುತ್ತಿದ್ದಾರೆ. ಆದರೆ ಇದನ್ನು ಸಹಿಸದ ಕೆಲವರು ಅವರ ವಿರುದ್ಧ ವಿನಾಕಾರಣ ಅಪಪ್ರಚಾರ ಮಾಡುತ್ತಿರುವುದು ಖಂಡನೀಯ ಎಂದರು.

ಸುದ್ದಿಗೋಷ್ಟಿಯಲ್ಲಿ ಕೌಸಲ್ಯ ಲಕ್ಷ್ಮಣಗೌಡ, ಸಾಯಿರಾ ಬಾನು, ತಾ.ಪಂ. ಮಾಜಿ ಅಧ್ಯಕ್ಷೆ ಲೋಲಾಕ್ಷಿ, ಸುಮಂಗಲಿ, ತಾಲೂಕು ಮಹಿಳಾ ಘಟಕದ ಕಾರ್ಯದರ್ಶಿ ಹಸೀನಾ ಹುರುಡಿ ಉಪಸ್ಥಿತರಿದ್ದರು.

## ಶಾಸಕ ಸಿಮೆಂಟ್ ಮಂಜು ಬೆಂಬಲಿಸಿ ಕಮಲ ಹಿಡಿದ ಕೈ ಕಾರ್ಯಕರ್ತರು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಶಾಸಕ ಸಿಮೆಂಟ್ ಮಂಜು ಅವರ ಆಡಳಿತ ವೈಖರಿ ಹಾಗೂ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿ ಕಾಂಗ್ರೆಸ್‌ನ ಹಲವು ಕಾರ್ಯಕರ್ತರು ಬಿಜೆಪಿ ಸೇರ್ಪಡೆಯಾದರು.




ತಾಲ್ಲೂಕಿನ ಬ್ಯಾಕರವಳ್ಳಿಯ ವೃತ್ತದಲ್ಲಿ ನಡೆದ ಸಮಾರಂಭದಲ್ಲಿ, ಶಾಸಕರ ಸಮ್ಮುಖದಲ್ಲಿ ಕಾಂಗ್ರೆಸ್ ತೊರೆದು ಬಿಜೆಪಿ ಸೇರ್ಪಡೆಯಾದರು. ಬ್ಯಾಕರವಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಚೆನ್ನಯ್ಯ ಅವರ ಪುತ್ರರಾದ ದರ್ಶನ್ ಹಾಗೂ ಮಂಜುನಾಥ್, ಮಾಜಿ ಸದಸ್ಯ ಪುಟ್ಟರಾಜು, ಹರಗರಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯ ನಾಗೇಶ್ ಸೇರಿದಂತೆ ಹಲವು ಯುವಕರು ಬಿಜೆಪಿ ಸೇರ್ಪಡೆಯಾದರು. ಶಾಸಕ ಸಿಮೆಂಟ್ ಮಂಜು, ಬಿಜೆಪಿ ಸಾಮಾನ್ಯ ಕಾರ್ಯಕರ್ತರ ಪಕ್ಷವಾಗಿದೆ. ಸಾಮಾನ್ಯ ಕಾರ್ಯಕರ್ತರಾಗಿದ್ದ 40 ವರ್ಷದ ನಿತಿನ್ ನಬಿನ್ ಅವರನ್ನು ಪಕ್ಷದ ರಾಷ್ಟ್ರೀಯ ಅಧ್ಯಕ್ಷರನ್ನಾಗಿ ಮಾಡಿರುವುದೇ ಇದಕ್ಕೆ ಸ್ಪಷ್ಟ ಉದಾಹರಣೆ. ಸ್ವತಃ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರೇ ನಿತಿನ್ ನಬಿನ್ ಅವರನ್ನು ಶ್ಲಾಘಿಸಿದ್ದು, ಪಕ್ಷದ ವಿಚಾರಕ್ಕೆ ಬಂದರೆ ನಿತಿನ್ ನಬಿನ್ ಬಾಸ್, ನಾನು ಪಕ್ಷದ ಕಾರ್ಯಕರ್ತ ಎಂದು ಹೇಳಿದ್ದಾರೆ. ಇದು ಬಿಜೆಪಿಯೊಳಗಿನ ನಿಜವಾದ ಪ್ರಜಾಪ್ರಭುತ್ವವನ್ನು ತೋರಿಸುತ್ತದೆ ಎಂದರು.

ನಮ್ಮ ಮೂಲ ಉದ್ದೇಶ ಈ ಕ್ಷೇತ್ರದ ಸಮಗ್ರ ಅಭಿವೃದ್ಧಿ. ಎಲ್ಲಾ ಜನರಿಗೆ ಸಾಮಾಜಿಕ ನ್ಯಾಯ ಒದಗಿಸುವುದರ ಜೊತೆಗೆ ಎಲ್ಲಾ ಜನಾಂಗಗಳನ್ನು ಒಟ್ಟಿಗೆ ಕರೆದುಕೊಂಡು ಹೋಗುವುದು ನಮ್ಮ ಗುರಿಯಾಗಿದೆ. ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಯುವಕರು ಬಿಜೆಪಿ ಪಕ್ಷಕ್ಕೆ ಸೇರ್ಪಡೆಯಾಗಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಮುಖಂಡರಾದ ಬ್ಯಾಕರವಳ್ಳಿ ಜಯಣ್ಣ, ಬ್ಯಾಕರವಳ್ಳಿ ಶಕ್ತಿ ಕೇಂದ್ರದ ಅಧ್ಯಕ್ಷ ಕಾರ್ತಿಕ್, ತಾಲೂಕು ಮಂಡಲ ಯುವ ಮೋರ್ಚಾ ಮಾಜಿ ಅಧ್ಯಕ್ಷ ಜಿತು ಶುಕ್ರವಾಸಂತೆ, ಬ್ಯಾಕರವಳ್ಳಿ ಬಸವರಾಜು, ಕುಣಿಗಲ್ ಪ್ರಸನ್ನ ಹಾಗೂ ಇತರರಿದ್ದರು.

## ಹಾಸ್ಯ ಪ್ರಧಾನ ಸೀಟ್ ಎಡ್ಜ್ ಸಿನಿಮಾ ಜ.30ಕ್ಕೆ ತೆರೆಗೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸೀಟ್ ಎಡ್ಜ್ ಸಿನಿಮಾ ಜ. 30ರಿಂದ ರಾಜ್ಯಾದ್ಯಂತ ಬಿಡುಗಡೆಯಾಗಲಿದೆ ಎಂದು ನಾಯಕ ನಟ ಸಿದ್ದು ಮೂಲಿಮನಿ ಹೇಳಿದರು.

ಸುದ್ದಿಗೋಷ್ಟಿಯಲ್ಲಿ ಶುಕ್ರವಾರ ಮಾತನಾಡಿ, ಪ್ರಸ್ತುತ ದಿನಗಳಲ್ಲಿ ತಂತ್ರಜ್ಞಾನ ದಿನದಿಂದ ದಿನಕ್ಕೆ ಬೆಳೆಯುತ್ತಲೇ ಇದ್ದು ಬ್ಲಾಗರ್‌ಗಳು ಅನೇಕ ಸಾಹಸ ಮಾಡುತ್ತಾರೆ. ಅದನ್ನೇ ಆದ್ಯತೆಯಾಗಿಟ್ಟುಕೊಂಡಿರುವ ಹಾಸ್ಯ ಮಿಶ್ರಿತ ಸಿನಿಮಾ ಇದಾಗಿದೆ. ಶಿವಮೊಗ್ಗ, ಬೆಂಗಳೂರು ಹಾಗೂ ಉಡುಪಿಯಲ್ಲಿ ಚಿತ್ರೀಕರಣ ನಡೆದಿದೆ. ಸಿನಿಮಾದಲ್ಲಿ 5 ಹಾಡುಗಳಿದ್ದು ಈಗಾಗಲೇ 3 ಹಾಡುಗಳನ್ನು ಯ್ಯೂಟೂಬ್‌ನಲ್ಲಿ ಬಿಡುಗಡೆ ಮಾಡಲಾಗಿದೆ ಎಂದರು. ಮಹಾರಾಷ್ಟ್ರದ ಯುಟ್ಯೂಬರ್ ಗೌರವ್ ತಿವಾರಿ ಅವರ ಜೀವನಾನುಭವದ ಘೋಸ್ಟ್ ಹಂಟಿಂಗ್ ಕಥೆ ಆಧರಿಸಿ ಸೃಷ್ಟಿಸಿರುವ ಸಿನಿಮಾ ಇದಾಗಿದೆ. ನೈಜ ಘಟನೆ ಆಧಾರಿತ ಚಲನಚಿತ್ರವಾಗಿರುವುದರಿಂದ ಪ್ರೇಕ್ಷಕರಿಗೆ ಇಷ್ಟವಾಗುತ್ತದೆ ಎಂದರು.



# ರೈತರು ಒಗ್ಗೂಡದಿದ್ದರೆ ಭವಿಷ್ಯದಲ್ಲಿ ಸಂಕಷ್ಟ ಖಚಿತ

## ಕೆಪಿಆರ್‌ಎಸ್ ಜಿಲ್ಲಾಧ್ಯಕ್ಷ ನವೀನ್‌ಕುಮಾರ್ | ಕಲ್ಕೆರೆಯಲ್ಲಿ ತಾಲ್ಲೂಕು ಸಮ್ಮೇಳನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ರೈತ ಸಮುದಾಯ ಸಂಘಟಿತರಾಗದಿದ್ದರೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನೀತಿಗಳನ್ನು ಹಿಮ್ಮೆಟ್ಟಿಸಿ ಕೃಷಿಯನ್ನು ಉಳಿಸಿಕೊಳ್ಳಲು ಸಾಧ್ಯವಿಲ್ಲ, ನಮಗೆ ಹೋರಾಟ ಒಂದೇ ಅಂತಿಮ ಅಸ್ತ್ರ ಎಂದು ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾಧ್ಯಕ್ಷ ಹೆಚ್.ಆರ್.ನವೀನ್ ಕುಮಾರ್ ಹೇಳಿದರು.

ತಾಲೂಕಿನ ಕಲ್ಕೆರೆಯಲ್ಲಿ ನಡೆದ ಕರ್ನಾಟಕ ಪ್ರಾಂತ ರೈತ ಸಂಘದ ಚನ್ನರಾಯಪಟ್ಟಣ ಎರಡನೇ ತಾಲೂಕು ಸಮ್ಮೇಳನದ ಬಹಿರಂಗ ಸಭೆ ಉದ್ಘಾಟಿಸಿ ಮಾತನಾಡಿ, ಕೇಂದ್ರದ ನರೇಂದ್ರ ಮೋದಿ ಸರ್ಕಾರ ವಿದ್ಯುತ್ ಖಾಸಗೀಕರಣ ಮಸೂದೆ, ಬೀಜ ಮಸೂದೆ, ವಿಬಿ ಜಿರಾಮ್ ಜಿ ಮಸೂದೆಗಳ ಮೂಲಕ ಕೃಷಿಯನ್ನೇ ನಂಬಿ ಬದುಕುತ್ತಿರುವ ರೈತಾಪಿ ಸಮುದಾಯವನ್ನು ಭೂಮಿಯಿಂದ ಸಂಪೂರ್ಣ ಒಕ್ಕಲೆಬ್ಬಿಸಿ ಇಡೀ ಕೃಷಿಯನ್ನು ಕಾರ್ಪೊರೇಟ್ ಕೃಷಿಯನ್ನಾಗಿ ಬದಲಾಯಿಸುವ ಹುನ್ನಾರ ಹೊಂದಿದೆ ಎಂದರು.

ಇದು ಮುಂದಿನ ದಿನಗಳಲ್ಲಿ ದೇಶದ ಕೃಷಿಯನ್ನು ಇನ್ನಷ್ಟು ಬಿಕ್ಕಟ್ಟಿಗೆ ತಳ್ಳಿ ಆಹಾರ ಭದ್ರತೆಯಲ್ಲಿ ಸಮಸ್ಯೆ ಉಂಟು ಮಾಡುತ್ತದೆ. 2014 ರಿಂದ ರೈತರ ಆದಾಯ ದ್ವಿಗುಣ ಮಾಡುತ್ತೇನೆಂದು ಭಾಷಣ ಮಾಡುವ ಪ್ರಧಾನಿ ಮೋದಿ, ಶ್ರೀಮಂತರ ಆಸ್ತಿ ಹೆಚ್ಚಳ ಮಾಡುವ




ನೀತಿಗಳನ್ನು ಜಾರಿಗೆ ತರುತ್ತಿದ್ದಾರೆಯೇ ಹೊರತು, ರೈತರನ್ನು ಬದುಕಿಸುವ ಯಾವ ನೀತಿಗಳನ್ನು ಜಾರಿಗೆ ತರುತ್ತಿಲ್ಲ. ರೈತರು ಬೆಳೆದ ಬೆಳೆಗಳಿಗೆ ಕೃಷಿ ತಜ್ಞ ಡಾ.ಎಂ.ಎಸ್.ಸ್ವಾಮಿನಾಥನ್ ವರದಿ ಪ್ರಕಾರ ಶೇ. 50 ರಷ್ಟು ಲಾಭಾಂಶ ಸೇರಿಸಿ ಬೆಲೆ ನಿಗದಿ ಮಾಡುಬೇಕೆನ್ನುವ ಬೇಡಿಕೆಗಳನ್ನು ರೈತ ಸಮುದಾಯ ನಿರಂತರವಾಗಿ ಸರ್ಕಾರದ ಮುಂದಿಡುತ್ತಿದ್ದರೂ ಈ ಕುರಿತು ಯಾವ ಸ್ಪಷ್ಟ ತೀರ್ಮಾನವನ್ನೂ ಘೋಷಿಸಲು ಮುಂದಾಗುತ್ತಿಲ್ಲ. ಬದಲಿಗೆ ಅಧಿಕಾರಕ್ಕೆ ಬಂದ ಆರೇ ತಿಂಗಳಲ್ಲಿ ಸ್ವಾಮಿನಾಥನ್ ವರದಿ ಜಾರಿಗೊಳಿಸಲು ಸಾಧ್ಯವಿಲ್ಲವೆಂದು ಸುಪ್ರೀಂ ಕೋರ್ಟ್‌ಗೆ ಪ್ರಮಾಣಪತ್ರ ಸಲ್ಲಿಸಿದರು. ಇಂತಹ ರೈತ ವಿರೋಧಿ ಸರ್ಕಾರಗಳ ನೀತಿಗಳನ್ನು ಬದಲಾಗಿಸಬೇಕಾದರೆ ರೈತ ಸಮುದಾಯ ಜಾಗೃತರಾಗಿ ಹಳ್ಳಿಗಳಲ್ಲಿ ಸಂಘಟಿತರಾದರೆ ಮಾತ್ರ ಕೃಷಿಯನ್ನು ಉಳಿಸಿಕೊಳ್ಳಲು ಸಾಧ್ಯ ಎಂದರು.

ಆ ನಿಟ್ಟಿನಲ್ಲಿ ಅಖಿಲ ಭಾರತ ಕಿಸಾನ್ ಸಭಾಗೆ ಸಂಯೋಜನೆಯೊದಿರುವ ಕರ್ನಾಟಕ ಪ್ರಾಂತ ರೈತ ಸಂಘ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲೂ ರೈತರ ಸಮ್ಮೇಳನಗಳನ್ನು ಸಂಘಟಿಸುವ ಮೂಲಕ ರೈತರನ್ನು ಜಾಗೃತರನ್ನಾಗಿಸಿ, ಸ್ಥಳೀಯ ಸಮಸ್ಯೆಗಳ ಪರಿಹಾರದ ಜೊತೆಗೆ ಕೇಂದ್ರ, ರಾಜ್ಯ ಸರ್ಕಾರಗಳ ನೀತಿಗಳನ್ನು ಹಿಮ್ಮೆಟ್ಟಿಸುವ ಹೋರಾಟಗಳಿಗೆ ಅಣಿಯಾಗುತ್ತಿದೆ ಎಂದರು. ಕೆಪಿಆರ್ ಎಸ್ ಜಿಲ್ಲಾ ಮುಖಂಡ ಹೆಚ್. ಎಸ್.ಮಂಜುನಾಥ್ ಮಾತನಾಡಿ, ಸರ್ಕಾರಗಳು ಉಚಿತ ವಿದ್ಯುತ್ ನೀಡುತ್ತಿರುವಾಗಲೇ ರೈತರು ಸಾಲ ಮಾಡುವುದು ತಪ್ಪಿಲ್ಲ, ಇನ್ನು ಕೃಷಿ ಪಂಪ್‌ಸೆಟ್‌ಗಳಿಗೆ ಪ್ರೀಪೈಡ್ ಡಿಜಿಟಲ್ ಮೀಟರ್ ಅಳವಡಿಸಿದರೆ ಆ ವಿದ್ಯುತ್ ಶಾಕ್‌ನಿಂದಾಗಿಯೇ ರೈತರು ಪ್ರಾಣ ಕಳೆದುಕೊಳ್ಳಬೇಕಾಗುತ್ತದೆ. ಭೂಮಿ ಮಾರಾಟ ಮಾಡಿ ವಿದ್ಯುತ್ ಬಿಲ್ ಕಟ್ಟುವ ಪರಿಸ್ಥಿತಿ ನಿರ್ಮಾಣವಾದರೂ ಆಶ್ಚರ್ಯ ಪಡಬೇಕಾಗಿಲ್ಲ. ಬಿಜೆಪಿ ಸರ್ಕಾರ ಜಾರಿಗೆ ತಂದಿರುವ ಈ ವಿದ್ಯುತ್ ಮಸೂದೆಯನ್ನು ತಮಿಳುನಾಡು, ಕೇರಳ ಸರ್ಕಾರಗಳು ತಾವು ಜಾರಿ ಮಾಡುವುದಿಲ್ಲವೆಂದು ವಿಧಾನಸಭಾ ಅಧಿವೇಶನಗಳಲ್ಲಿ ನಿರ್ಣಯಗಳನ್ನು ಕೈಗೊಂಡಿವೆ. ಆದರೆ, ರಾಜ್ಯದ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಮೌನವಾಗಿದೆ. ಮಣ್ಣಿನ ಮಕ್ಕಳ ಪಕ್ಷ ಎಂದು ಹೇಳುವ ಜೆಡಿಎಸ್ ಕೇಂದ್ರದ ಜೊತೆ ಸೇರಿ ರೈತರಿಗೆ ಮೋಸ ಮಾಡುತ್ತಿದ್ದಾರೆ. ದೊಡ್ಡ ದೊಡ್ಡ ಕಾರ್ಪೊರೇಟ್ ಕಂಪನಿಗಳಿಗೆ, ಶ್ರೀಮಂತರಿಗೆ ಲಕ್ಷಾಂತರ ಕೋಟಿ ರೂ. ಸಾಲ ಮನ್ನಾ, ತೆರಿಗೆ ವಿನಾಯಿತಿ ಮಾಡುವ ಸರ್ಕಾರಗಳು ದೇಶಕ್ಕೆ ಅನ್ನ ನೀಡುವ ರೈತರ ಸಾಲ ಮನ್ನಾ ಮಾಡುವುದಿಲ್ಲ. ರೈತರಿಗೆ ಕೊಡುತ್ತಿರುವ ಎಲ್ಲಾ ರೀತಿಯ ಸಬ್ಸಿಡಿಗಳನ್ನು ಕಡಿತಗೊಳಿಸಲಾಗುತ್ತಿದೆ. ಅದರಲ್ಲಿ ವಿದ್ಯುತ್ ಖಾಸಗೀಕರಣ ಬರಸಿಡಿಲಿನಂತೆ ರೈತ ಸಮುದಾಯದ ಮೇಲೆ ಎರಗುತ್ತಿದೆ. ಇದನ್ನು ಹಿಮ್ಮೆಟ್ಟಿಸಲು ರೈತರು ತಯಾರಾಗಬೇಕೆ ಎಂದು ಕರೆ ನೀಡಿದರು.

### ತೆಂಗಿಗೆ ನ್ಯಾಯಯುತ ಬೆಲೆ ಸಿಗಲಿ

ತೆಂಗು ಬೆಳೆಗಾರರ ಹೋರಾಟ ಸಮಿತಿ ಅಧ್ಯಕ್ಷ ವಳಗೆರಹಳ್ಳಿ ರಾಮಚಂದ್ರು ಮಾತನಾಡಿ, ಚನ್ನರಾಯಪಟ್ಟಣ ರೈತರು ಬಹುತೇಕ ತೆಂಗಿನ ಮೇಲೆ ಅವಲಂಬಿತರಾಗಿದ್ದರೆ. ಆದರೆ ಈ ತೆಂಗು ಹಲವು ಬಾರಿ ಅವರನ್ನು ಕೈಹಿಡಿಯುವ ಬದಲು ನಷ್ಟವನ್ನೇ ತಂದುಕೊಟ್ಟಿದೆ. ಇದರ ವಿರುದ್ಧ ತಾಲೂಕಿನಲ್ಲಿ ಹೋರಾಟ ಆರಂಭಿಸಿ ಕೊಬ್ಬರಿಗೆ ನ್ಯಾಯಯುತ ಬೆಲೆ ಕೊಡಿಸಲು ಸಾಧ್ಯವಾಗಿದೆ. ತಾಲ್ಲೂಕಿನಲ್ಲಿ ಯುವಕರಿಗೆ ಉದ್ಯೋಗಗಳನ್ನೂ ಸೃಷಿಸುವ ಮತ್ತು ತೆಂಗಿಗೆ ಉತ್ಪನ್ನಗಳಿಗೆ ಮೌಲ್ಯವರ್ದನೆ ಮಾಡುವ ಕೈಗಾರಿಕೆಗಳನ್ನು ಸ್ಥಾಪಿಸುವ ಮೂಲಕ ತೆಂಗು ಬೆಳೆಗಾರರನ್ನು ರಕ್ಷಿಸುವ ಕೆಲಸವನ್ನು ಮಾಡಬೇಕಾದದ್ದು ಸರ್ಕಾರಗಳ ಕರ್ತವ್ಯ ಎಂದರು.

ರೈತ ಮುಖಂಡರಾದ ಬರಗೂರು ಶಂಕರಣ್ಣ, ಸುಜಾತಾ ಕುಮಾರಸ್ವಾಮಿ, ವಾಸುದೇವ ಕಲ್ಕೆರೆ, ತೇಜಸ್‌ಗೌಡ, ಶ್ರೀನಿವಾಸ್ ಮತ್ತಿತರಿದ್ದರು.

### 19 ಜನರ ತಾಲ್ಲೂಕು ಸಮಿತಿ ರಚನೆ

ಬಹಿರಂಗ ಸಭೆಯ ನಂತರ ನಡೆದ ಪ್ರತಿನಿಧಿಗಳ ಅಧಿವೇಶನದಲ್ಲಿ ತಾಲೂಕಿನ ರೈತರ ಸಮಸ್ಯೆಗಳ ಕುರಿತು ಚರ್ಚಿಸಿ ಹಲವು ನಿರ್ಣಯಗಳನ್ನು ಕೈಕೊಂಡು ಸಂಘಟನೆಯನ್ನು ಬಲಗೊಳಿಸಲು 19 ಜನರ ನೂತನ ತಾಲೂಕು ಸಮಿತಿಯನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ಗೌರವಾಧ್ಯಕ್ಷರಾಗಿ ಜೆ.ಎನ್. ಚಂದ್ರಹಾಸ್ ಜಿನ್ನೇನಹಳ್ಳಿ, ಅಧ್ಯಕ್ಷರಾಗಿ ತೇಜಸ್‌ಗೌಡ ಗೋವಿನಕೆರೆ, ಉಪಾಧ್ಯಕ್ಷರಾಗಿ ರಾಮಚಂದ್ರ ವಳಗೆರಹಳ್ಳಿ, ಸುಜಾತಾ ಕುಮಾರಸ್ವಾಮಿ, ಕಾರ್ಯದರ್ಶಿಯಾಗಿ ವಾಸುದೇವ ಕಲ್ಕೆರೆ, ಜಂಟಿ ಕಾರ್ಯದರ್ಶಿಗಳಾಗಿ ದೊರೆ ಕಬ್ಬಳಿ, ಶ್ರೀನಿವಾಸ ಗೊಲ್ಲರಹೊಸಳ್ಳಿ, ರಾಘವೇಂದ್ರ ಪಾಟೀಲ್ ನೇಮಕಗೊಂಡರು.

# ಹಣ, ಆಸ್ತಿಗಿಂತ ಆರೋಗ್ಯ ಮುಖ್ಯ: ಡಾ. ಲೋಕೇಶ್



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಆಹಾರ ಪದ್ಧತಿಯೊಂದಿಗೆ ಜೀವನ ಶೈಲಿಯ ಬದಲಾವಣೆಯ ಪರಿಣಾಮ ಆರೋಗ್ಯ ಸ್ಥಿತಿಯು ಸೀಮಿತ ಕಳೆದುಕೊಳ್ಳುತ್ತಿದೆ ಎಂದು ನ್ಯೂ ಸ್ಪರ್ಶ ಲೈಫ್ ಲೈನ್ ಹಾಸ್ಪಿಟಲ್ ವೈದ್ಯ ಡಾ.ಲೋಕೇಶ್ ಹೇಳಿದರು.

ಪಟ್ಟಣದಲ್ಲಿ ನ್ಯೂ ಸ್ಪರ್ಶ ಲೈಫ್ ಲೈನ್ ಹಾಸ್ಪಿಟಲ್, ರಂಗ ಕಲಾಸಿರಿ ಸಂಘ ಹಾಗೂ ಶ್ರೀ ರಾಮ ಸೇನೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಆರೋಗ್ಯ ಉಚಿತ ತಪಾಸಣೆ ಹಾಗೂ ರಕ್ತದಾನ ಶಿಬಿರದಲ್ಲಿ ಮಾತನಾಡಿ, ಹಣ, ಆಸ್ತಿಗಿಂತ ಆರೋಗ್ಯ ಸಂಪಾದನೆ ಅತಿಮುಖ್ಯ ಎಂದರು.

ಗ್ರಾಮೀಣ ಭಾಗದ ಜನತೆ ಸದಾ ಕೃಷಿ ಚಟುವಟಿಕೆಗಳಲ್ಲಿ ತೊಡಗುವ ಬರದಲ್ಲಿ ತಮ್ಮ ಆರೋಗ್ಯದ ಕಡೆ ಗಮನ ಹರಿಸುತ್ತಿಲ್ಲ. ವರ್ಷದಲ್ಲಿ ಒಂದೆರಡು ಬಾರಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವುದು ಉತ್ತಮ ಎಂದು ಸಲಹೆ ನೀಡಿದರು.

ರಕ್ತದಾನ ಮಾಡುವುದರಿಂದ ಆರೋಗ್ಯ ವೃದ್ಧಿಯಾಗುವುದರ ಜೊತೆಗೆ ಇತರರ ಬದುಕಿಗೆ ಬೆಳಕು ನೀಡಿದ ಪುಣ್ಯ ಸಿಗಲಿದೆ. ಅಪಘಾತಗಳು ಸಂಭವಿಸಿದ ಸಂದರ್ಭದಲ್ಲಿ ಹಾಗೂ ಶಸ್ತ್ರ ಚಿಕಿತ್ಸೆ ವೇಳೆ ರಕ್ತದ ಅವಶ್ಯಕತೆ ಹೆಚ್ಚಾಗಿರುತ್ತದೆ. ಅಂತಹ ಸಮಯದಲ್ಲಿ ರಕ್ತ ಸಿಗದೇ ರೋಗಿಗಳು ಸಾವು-ಬದುಕಿನ ನಡುವೆ ಹೋರಾಡಬೇಕಾದ ಅನಿವಾರ್ಯತೆ ಎದುರಾಗಲಿದೆ. ದಯವಿಟ್ಟು ಇಂತಹ ಶಿಬಿರಗಳಲ್ಲಿ ಪಾಲ್ಗೊಂಡು ರಕ್ತದಾನ ಮಾಡುವ ಮೂಲಕ ಇತರರಿಗೂ ನೆರವಾಗಬೇಕು ಎಂದು ತಿಳಿಸಿದರು.

ಶಿಬಿರದಲ್ಲಿ ರಕ್ತದೊತ್ತಡ, ಮಧುಮೇಹ, ಕಣ್ಣಿನ ಪರೀಕ್ಷಿಸಿ ಸೇರಿದಂತೆ ವಿವಿಧ ತಪಾಸಣೆಗಳು ಜರುಗಿದ್ದು 110 ಕ್ಕೂ ಹೆಚ್ಚು ಮಂದಿ ಆರೋಗ್ಯ ತಪಾಸಣೆ ಮಾಡಿಸಿಕೊಂಡರು.

ವೈದ್ಯರಾದ ಡಾ. ಪ್ರವೀಣ್, ಆಯುರ್ವೇದ ತಜ್ಞ ಡಾ.ಪ್ರವೀಣ್, ಡಾ. ನೇಹಾ ಹಾಗೂ ಇತರರು ಇದ್ದರು.

# ಗ್ರಾಮ ಪಂಚಾಯಿತಿ ಅಧಿಕಾರ ಕಡೆಗಣಿಸಬೇಡಿ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಜಿಲ್ಲಾ ಪಂಚಾಯಿತಿ ಹಾಗೂ ತಾಲೂಕು ಪಂಚಾಯಿತಿ ಈಗಾಗಲೇ ನಿಷ್ಕ್ರಿಯಗೊಂಡಿದ್ದು ಗ್ರಾಮ ಪಂಚಾಯಿತಿಗಳ ಬಗ್ಗೆಯೂ ಸರ್ಕಾರ ತಾತ್ಸಾರ ಮನೋಭಾವ ತೋರಿದರೆ ಸ್ಥಳೀಯ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗುವುದಿಲ್ಲ ಎಂದು ದೊಡ್ಡ ಮೇಟಿಕುರ್ಕೆ ಗ್ರಾಮ ಪಂಚಾಯಿತಿ ಸದಸ್ಯರಾದ ಗಿರೀಶ್ ಮತ್ತು ಕುಮಾರಸ್ವಾಮಿ ಅಸಮಾಧಾನ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಜ. 30ಕ್ಕೆ ಗ್ರಾಮ ಪಂಚಾಯಿತಿಯ ಅಧಿಕಾರಾವಧಿ ಮುಕ್ತಾಯವಾಗಲಿದ್ದು ಸರ್ಕಾರ ಮುಂದಿನ ಚುನಾಯಿತ ಪಂಚಾಯಿತಿ ಅಧಿಕಾರಕ್ಕೆ ಬರುವವರೆಗೆ ಆಡಳಿತ ಅಧಿಕಾರಿ ನೇಮಕ ಮಾಡಿಕೊಂಡು ನಾಮಿನಿ ಸದಸ್ಯರೊಂದಿಗೆ ಸ್ಥಳೀಯ ಗ್ರಾಮ ಪಂಚಾಯಿತಿಯನ್ನು ಮುನ್ನಡೆಸಿಕೊಂಡು ಹೋಗುವಂತೆ ಸುತ್ತೋಲೆ ಹೊರಡಿಸಿರುವುದು ಹಾಸ್ಯಸ್ಪದವಾಗಿದೆ ಎಂದು ವ್ಯಂಗ್ಯವಾಡಿದರು.

ಈಗಾಗಲೇ ಚುನಾಯಿತರು ಅಧಿಕಾರದಲ್ಲಿದ್ದು ಇವರನ್ನೇ ಮುಂದಿನ ಚುನಾಯಿತ ಬಾಡಿ ಅಧಿಕಾರಕ್ಕೆ ಬರುವವರೆಗೆ ಮುಂದುವರಿಸಿಕೊಂಡು ಹೋಗಲು ಸರ್ಕಾರಕ್ಕೆ ನಿಯಮಾನಸಾರವೇ ಅವಕಾಶವಿದ್ದು ಈ ನಿಟ್ಟಿನಲ್ಲಿ ಸರ್ಕಾರ ಗಮನ ಹರಿಸುವ ಮೂಲಕ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು. ನಾಮಿನಿ ಆಡಳಿತಕ್ಕಿಂತ ಚುನಾಯಿತ ಜನಪ್ರತಿನಿಧಿಗಳು ಬಾಡಿಯನ್ನೇ ಮುಂದುವರಿಸುವುದರಿಂದ ಈಗಾಗಲೇ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿಗಳ ಮುಂದುವರಿಕೆಗೆ ಸಹಕಾರಿಯಾಗಲಿದೆ ಎಂದರು.

ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ರಮೇಶ್, ಮಾಜಿ ಉಪಾಧ್ಯಕ್ಷ ಮಲ್ಲಿಕಾರ್ಜುನ್ ಇತರರಿದ್ದರು.

# ಭೂ ಕುಸಿತವಾಗಿದ್ದ ಕುಂಬರಡಿ ರಸ್ತೆಗೆ ಭೂಮಿಪೂಜೆ

## ಶಾಸಕ ಸಿಮೆಂಟ್ ಮಂಜು ಶ್ರಮದ ಫಲ | ಸಾರ್ವಜನಿಕರು ನಿರಾಳ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ತಾಲೂಕಿನ ಹೆಬ್ಬಸಾಲೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕುಂಬರಡಿ ಹಾಗೂ ಹಾರ್ಲೆ ಎಸ್ಟೇಟ್ ನಡುವಿನ ನೂತನ ರಸ್ತೆ ನಿರ್ಮಾಣ ಕಾಮಗಾರಿಗೆ ಶಾಸಕ ಸಿಮೆಂಟ್ ಮಂಜು ಭೂಮಿ ಪೂಜೆ ನೆರವೇರಿಸಿದರು.

ಎರಡು ವರ್ಷಗಳ ಹಿಂದೆ ನಿರಂತರವಾಗಿ ಸುರಿದ ಭಾರೀ ಮಳೆಯಿಂದಾಗಿ ಕುಂಬರಡಿಹಾರ್ಲೆ ಎಸ್ಟೇಟ್ ಸಂಪರ್ಕ ರಸ್ತೆ ಸಂಪೂರ್ಣವಾಗಿ ಭೂಕುಸಿತಕ್ಕೆ ಒಳಗಾಗಿದ್ದು, ಹತ್ತಾರು ಗ್ರಾಮಗಳು ಸಂಪರ್ಕ ಕಳೆದುಕೊಂಡಿದ್ದವು.

ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಶಾಸಕ ಸಿಮೆಂಟ್ ಮಂಜು, ಸಕಲೇಶಪುರಮಾರನಹಳ್ಳಿ ನಡುವಿನ ರಾಷ್ಟ್ರೀಯ ಹೆದ್ದಾರಿ ಬಂದ್ ಆಗಿದ್ದ ಸಂದರ್ಭದಲ್ಲಿ ಪರ್ಯಾಯ ಮಾರ್ಗವಾಗಿ ಬಳಸಲಾಗುತ್ತಿದ್ದ ಹಾರ್ಲೆನಡಹಳ್ಳಿ ಮುಖ್ಯ ರಸ್ತೆಯೂ ಸೇರಿದಂತೆ ಗುಡ್ಡದ ಭಾಗ ಕುಸಿದು ಸುಮಾರು 30 ಗ್ರಾಮಗಳ ಸಂಪರ್ಕ ಕಡಿತಗೊಂಡಿತ್ತು. ಕುಂಬರಡಿ, ನಡಹಳ್ಳಿ, ದೇಖಲ, ಮಲ್ಲಾಗದ್ದೆ, ಕಾಡಮನೆ ಸೇರಿದಂತೆ 30 ಗ್ರಾಮಗಳು ಹಾಗೂ 40ಕ್ಕೂ ಹೆಚ್ಚು ಹ್ಯಾಮ್ಲೆಟ್ ಗ್ರಾಮಗಳಿಗೆ ಹಾರ್ಲೆ ಎಸ್ಟೇಟ್‌ಹಾರ್ಲೆ ಕೂಡಿಗೆ ಮಾರ್ಗವೇ ಸಕಲೇಶಪುರ ಹಾಗೂ ಮೂಡಿಗೆರೆಗೆ ಇದ್ದ ಏಕೈಕ ಸಂಪರ್ಕ ರಸ್ತೆ ಆಗಿತ್ತು ಎಂದು ತಿಳಿಸಿದರು.

### 4.50 ಕೋಟಿ ರೂ. ಬಿಡುಗಡೆ



ರಾಜ್ಯ ಸರ್ಕಾರದೊಂದಿಗೆ ನಿರಂತರ ಸಂಪರ್ಕ ಹಾಗೂ ಮನವಿ ಸಲ್ಲಿಸಿದ ಫಲವಾಗಿ ಜಲಸಂಪನ್ಮೂಲ ಇಲಾಖೆಯ ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ ವತಿಯಿಂದ ಸುಮಾರು 4.50 ಕೋಟಿ ರೂ. ವೆಚ್ಚದಲ್ಲಿ ಕಾಡುಮನೆ ರಸ್ತೆ ಸರಪಳಿ, ಮಳೆ ಹಾನಿಯಿಂದ ಉಂಟಾದ ಗುಡ್ಡ ಕುಸಿತ ಪ್ರದೇಶದಲ್ಲಿ ರಕ್ಷಣಾತ್ಮಕ ಕಾಮಗಾರಿ ಹಾಗೂ ಕಾಂಕ್ರೀಟ್ ರಸ್ತೆ ನಿರ್ಮಾಣಕ್ಕೆ ಚಾಲನೆ ನೀಡಲಾಗಿದೆ ಎಂದು ಹೇಳಿದರು.

ರಾಷ್ಟ್ರೀಯ ಹೆದ್ದಾರಿ 75ರಲ್ಲಿ ಭೂಕುಸಿತ ಉಂಟಾಗಿ ರಸ್ತೆ ಬಂದ್ ಆದ ಸಂದರ್ಭಗಳಲ್ಲಿ ಬದಲಿ ಮಾರ್ಗವಾಗಿ ಬಳಸಲಾಗುತ್ತಿದ್ದ ಕಾಡಮನೆ ಸಂಪರ್ಕ ರಸ್ತೆಯಲ್ಲಿ ಎರಡು ವಾಹನಗಳು ಸುಗಮವಾಗಿ ಸಂಚರಿಸಲು ಸಾಧ್ಯವಾಗುತ್ತಿರಲಿಲ್ಲ. ಇದನ್ನು ಮನಗಂಡು ಸುಮಾರು ₹4 ಕೋಟಿ ವೆಚ್ಚದಲ್ಲಿ ಕ್ಯಾಮನಹಳ್ಳಿ ಹಾಗೂ ಬೆಳ್ಳೆಕೆರೆ ಮಾರ್ಗದ ರಸ್ತೆಯನ್ನು ಅಗಲೀಕರಣ ಮಾಡಲಾಗಿದೆ ಎಂದರು. ಭೂಕುಸಿತದಿಂದ ಕುಂಬರಡಿ ರಸ್ತೆ ಸಂಪೂರ್ಣವಾಗಿ ಕೊಚ್ಚಿಕೊಂಡು ಹೋಗಿದ್ದರಿಂದ ಪುನರ್ ರಸ್ತೆ ನಿರ್ಮಾಣ ಕಾರ್ಯ ದೊಡ್ಡ ಸವಾಲಾಗಿತ್ತು. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸರ್ಕಾರದ ಹಿರಿಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು. ಈ ವೇಳೆ ಈ ಭಾಗದ ಬೆಳೆಗಾರರು ಹಾಗೂ ರೈತರು ಎತ್ತಿನಹೊಳೆ ಯೋಜನೆಗಾಗಿ ತಮ್ಮ ಭೂಮಿಯನ್ನು ಕಳೆದುಕೊಂಡಿದ್ದು, ಕನಿಷ್ಠ ಮೂಲಭೂತ ಸೌಕರ್ಯವಾದ ರಸ್ತೆ ನಿರ್ಮಾಣ ಅಗತ್ಯವಿದೆ ಎಂದು ಮುಖ್ಯಮಂತ್ರಿಗೆ ಮನವಿ ಮಾಡಿದ್ದೆ. ಇದರ ಫಲವಾಗಿ ಇದೀಗ ಸರ್ಕಾರ ರಸ್ತೆ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡಿದೆ ಎಂದು ಹೇಳಿದರು.

ರಸ್ತೆಯ ಎರಡೂ ಬದಿಗಳಲ್ಲಿ ತಡೆಗೋಡೆ ನಿರ್ಮಿಸಿ ಗುಣಮಟ್ಟದ ಕಾಮಗಾರಿ ಕೈಗೊಳ್ಳಲಾಗುತ್ತಿದ್ದು, ಈಗಾಗಲೇ ನುರಿತ ತಜ್ಞರಿಂದ ಮಣ್ಣು ಪರೀಕ್ಷೆ ನಡೆಸಲಾಗಿದೆ. ಇದರಿಂದ ಉತ್ತಮ ರಸ್ತೆ ನಿರ್ಮಾಣ ಸಾಧ್ಯವಾಗಲಿದೆ ಎಂದರು. ಈ ಭಾಗದಲ್ಲಿ ಇನ್ನೂ ಹಲವು ರಸ್ತೆ ಕಾಮಗಾರಿಗಳಿಗೆ ಒಂದು ವಾರದೊಳಗೆ ಚಾಲನೆ ನೀಡಲಾಗುವುದು ಎಂದು ತಿಳಿಸಿದರು.

ಕುಂಬರಡಿ ಮುಖ್ಯ ರಸ್ತೆಯಲ್ಲಿ ಭೂಕುಸಿತದಿಂದ ಸಂಪರ್ಕ ಕಡಿತಗೊಂಡ ಸಂದರ್ಭದಲ್ಲಿ ಪಕ್ಕದ ಹಾರ್ಲೆ ಎಸ್ಟೇಟ್ ಮಾಲೀಕರು ಸಾರ್ವಜನಿಕರ ಅನುಕೂಲಕ್ಕಾಗಿ ತಾತ್ಕಾಲಿಕ ರಸ್ತೆ ನಿರ್ಮಿಸಲು ಅವಕಾಶ ನೀಡಿದ ಸಹಕಾರವನ್ನು ಈ ವೇಳೆ ಸ್ಮರಿಸಿದರು.

ಹೆಬ್ಬಸಾಲೆ ಗ್ರಾಮ ಪಂಚಾಯಿತಿ ಅಧ್ಯಕ್ಷೆ ನೇತ್ರಾವತಿ ಮೇಘರಾಜ್, ಉಪಾಧ್ಯಕ್ಷ ಆನಂದ್, ಸದಸ್ಯರಾದ ರಘುನಂದನ್, ನಾಗೇಶ್, ಮಂಜುನಾಥ್, ಭಾಗ್ಯ, ಕಾಂಗ್ರೆಸ್ ಮುಖಂಡ ಹಾನುಬಾಳು ಭಾಸ್ಕರ್, ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತದ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ವೆಂಕಟೇಶ್, ಹಾರ್ಲೆ ಎಸ್ಟೇಟ್ ಮಾಲೀಕ ಪೂರ್ಣೇಶ್, ಮುಖಂಡರಾದ ಕ್ಯಾಮನಹಳ್ಳಿ ರಾಜಕುಮಾರ್, ಮೇಘರಾಜ್ ಹಾಗೂ ಇತರರಿದ್ದರು.

# ಕಷ್ಟದ ಕೆಲಸ ಎದುರಿಸಲು ನಿರಂತರ ಶ್ರಮ ಬೇಕು

## ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ | ವಿದ್ಯಾರ್ಥಿಗಳಿಗೆ ಕಾರ್ಯಾಗಾರ

ಹಾಸನ: ಜೀವನದಲ್ಲಿ ಯಾವುದೇ ಕಷ್ಟದ ಕೆಲಸಗಳನ್ನು ಎದುರಿಸಲು ನಿರಂತರ ಪರಿಶ್ರಮವಿದ್ದಾಗ ಮಾತ್ರ ಸಾಧ್ಯವಾಗುತ್ತದೆ ಎಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಹೇಳಿದರು.

ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಈಚೆಗೆ ರೋಟರಿ ಕ್ಲಬ್ ಆಫ್ ಹಾಸನ ರಾಯಲ್, ಶಾಲಾ ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ ವತಿಯಿಂದ ಹಾಸನ ತಾಲೂಕು ಮಟ್ಟದ ಎಸ್‌ಎಸ್‌ಎಲ್‌ಸಿ ಮಕ್ಕಳಿಗೆ ಹಮ್ಮಿಕೊಂಡಿದ್ದ ಪರೀಕ್ಷೆ ಎದುರಿಸುವುದು ಹೇಗೆ ಎಂಬ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪರೀಕ್ಷೆ ಸಮಯದಲ್ಲಿ ವಿದ್ಯಾರ್ಥಿಗಳು ಭಯ ಪಡದ ಬೇಕಾದ ಅಗತ್ಯವಿಲ್ಲ, ಬದಲಾಗಿ ಇರುವ ಸಮಯವನ್ನು ಸದುಪಯೋಗ ಮಾಡಿಕೊಂಡು ನಿರಂತರ ಓದುವಿಕೆಯಲ್ಲಿ ತೊಡಗಿಕೊಂಡರೆ ಪರೀಕ್ಷೆಯನ್ನು ಸುಲಭವಾಗಿ ಎದುರಿಸಬುಹುದಾಗಿದೆ. ನವ ಪೀಳಿಗೆಯ ಯುವಕ ಯುವತಿಯರು ನವ ಮಾಧ್ಯಮಗಳನ್ನು ಹೆಚ್ಚಾಗಿ ಬಳಕೆ ಮಾಡುವುದನ್ನು ನಿಲ್ಲಿಸಿ ಓದಿನ ಕಡೆ ಹೆಚ್ಚು ಸಮಯ ನೀಡಬೇಕು.




ಮನರಂಜನೆಗಾಗಿ ಕೆಲ ಸಮಯವನ್ನು ಮಾತ್ರ ಮಾಧ್ಯಮಗಳನ್ನು ಬಳಕೆ ಮಾಡಿಕೊಳ್ಳಬೇಕು. ಪ್ರತಿಯೊಬ್ಬರಲ್ಲೂ ಬೌದ್ಧಿಕ ಶಕ್ತಿ ಇದ್ದೇ ಇರುತ್ತದೆ, ಹಾಗಾಗಿ ಅದನ್ನು ಬಳಕೆ ಮಾಡಿಕೊಳ್ಳವ ಮಾರ್ಗ ಕಂಡುಕೊಳ್ಳಬೇಕು. ಓದುವ ಕ್ರಮಗಳು ಅನೇಕ ಮಾರ್ಗದಲ್ಲಿ ಇದ್ದು, ಓದುವ ಮಾರ್ಗಗಳನ್ನು ಕಂಡುಕೊಳ್ಳುವ ಮೂಲಕ ಶಾಲಾ ಹಂತದಲ್ಲಿಯೇ ಮಕ್ಕಳು ತಮ್ಮ ಬೌದ್ಧಿಕ ಶಕ್ತಿಯನ್ನು ಹೆಚ್ಚಿಸಿಕೊಳ್ಳಬೇಕು. ರೋಟರಿ ಸಂಸ್ಥೆ ಹಾಗೂ ಮಕ್ಕಳ ಸಾಹಿತ್ಯ ಪರಿಷತ್ ಮಕ್ಕಳಿಗೆ ಹಮ್ಮಿಕೊಂಡಿರುವ ಕಾರ್ಯಕ್ರಮ ನಿಜಕ್ಕೂ ಅರ್ಥಪೂರ್ಣವಾಗಿದೆ ಎಂದು ಹೇಳಿದರು.

ಮಕ್ಕಳಿಗೆ ಎಸ್‌ಎಸ್‌ಎಲ್‌ಸಿ ಹಂತದಲ್ಲಿ ಹೆಚ್ಚು ಪರಿಣಾಮಕಾರಿ ಘಟ್ಟವಾಗಿದ್ದು, ಈ ಹಂತದಲ್ಲಿ ಮಕ್ಕಳಿಗೆ ಉತ್ತಮ ತರಬೇತಿ ನೀಡಬೇಕಾದ ಅವಶ್ಯಕತೆ ಇದೆ. ಶಾಲೆಗಳಲ್ಲಿ ಹಾಗೂ ಮನೆಗಳಲ್ಲಿ ಮಕ್ಕಳನ್ನು ಸರಿದಾರಿ ನಡೆಯುವಂತೆ ನೋಡಿಕೊಳ್ಳಬೇಕು. ಎಸ್‌ಎಸ್‌ಎಲ್‌ಸಿ ಮುಗಿಸಿದ ನಂತರ ಯಾವ ಕ್ಷೇತ್ರವನ್ನು ಆಯ್ಕೆ ಮಾಡಿಕೊಳ್ಳಬೇಕೆಂಬ ನಿರ್ಧಾರಗಳು ಈ ಹಂತದಲ್ಲಿ ಆಗಬೇಕಿದೆ. ಈ ಹಂತದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಯ ಕಡೆಗೂ ಹೆಚ್ಚು ಒತ್ತು ನೀಡಿದರೆ ದೇಶದ ಒಬ್ಬ ನಾಗರೀಕನಾಗಿ ಜನ ಸಾಮಾನ್ಯರ ಕೆಲಸ ಮಾಡಲು ಸಾಧ್ಯವಾಗುತ್ತದೆ. ನಮ್ಮ ಇಂದಿನ ಯುವ ಪೀಳಿಗೆ ದೇಶಕ್ಕಾಗಿ ದುಡಿಯುವ ಮನಸ್ಥಿತಿ ಬೆಳೆಸಿಕೊಳ್ಳಬೇಕು. ಮೊದಲಿಗೆ ಸಮಾಜದಲ್ಲಿ ಒಬ್ಬ ಒಳ್ಳೆಯ ನಾಗರೀಕನಾಗಬೇಕು, ನಂತರ ಒಳ್ಳೆಯ ಅಧಿಕಾರಿಯಾಗಿ, ಸಮಾಜ ಸೇವಕನಾಗಿ ಬೆಳೆಯುವ ಮೂಲಕ ಸಮಾಜದ ಕೆಲಸವನ್ನು ಮಾಡಬೇಕು. ದೇಶದ ಪ್ರಗತಿಯಲ್ಲಿ ನಮ್ಮ ಯುವ ಸಮುದಾಯದ ಪಾತ್ರ ಅತ್ಯವಶ್ಯಕವಾಗಿದೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ತಮಗೆ ಎದುರುಗಾರುವ ಶಾಲಾ/ಕಾಲೇಜುಗಳ ಪರೀಕ್ಷೆಯಾಗಿರಲಿ ಜೀವನದಲ್ಲಿ ಎದುರಾಗುವ ಪರೀಕ್ಷೆಗಳೇ ಆಗಿರಲಿ ಎಲ್ಲವನ್ನೂ ಗಟ್ಟಿಯಾಗಿ ಎದುರಿಸಬೇಕಾದ ಅವಶ್ಯಕತೆ ಇದೆ ಎಂದರು.

ರೋಟರಿ ಜಿಲ್ಲಾ ಗವರ್ನರ್ ಕೆ. ಪಾಲಾಕ್ಷ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಎಲ್ಲರೂ ಸಾಧನೆ ಮಾಡಬೇಕೆಂಬ ಗುರಿಯೊಂದಿಗೆ ಮುಂದೆ ಸಾಗಬೇಕಿದೆ. ಎಲ್ಲಾ ಕ್ಷೇತ್ರದಲ್ಲೂ ಪೈಪೋಟಿ ಇದ್ದು, ಯುವಕರು ತಾವು ಯಾವ ಕ್ಷೇತ್ರದಲ್ಲಿ ಸಾಗಬೇಕೆಂಬ ಗುರಿಯೊಂದಿಗೆ ಆ ಕ್ಷೇತ್ರದ ಬಗೆಗೆ ಕೌಶಲ್ಯ ಬೆಳೆಸಿಕೊಳ್ಳಬೇಕು. ಕ್ರೀಡೆ, ಸಂಗೀತ, ನೃತ್ಯ, ಶಿಕ್ಷಣ ಹೀಗೆ ಪ್ರತಿಯೊಂದು ಕ್ಷೇತ್ರದಲ್ಲೂ ಪೈಪೋಟಿ ಇದೆ, ಎಸ್‌ಎಸ್‌ಎಲ್‌ಸಿ ಹಂತದಲ್ಲಿ ಮಕ್ಕಳು ತಾವುಗಳು ಸಾಧಿಸಬೇಕಾದ ಕ್ಷೇತ್ರವನ್ನು ಆಯ್ಕೆ ಮಾಡಿಕೊಂಡು ಆ ಕ್ಷೇತ್ರಕ್ಕೆ ಬೇಕಾಗುವ ಕೌಶಲ್ಯವನ್ನು ಕಲಿಯುವುದರೊಂದಿಗೆ ಜೀವನದಲ್ಲಿ ಸಾಧನೆ ಮಾಡಬೇಕಾಗಿದೆ. ಸಾಧಿಸಲು ಇಂದು ಅನೇಕ ಕ್ಷೇತ್ರಗಳು ಇವೆ, ಸಾಧಿಸುವ ಛಲವನ್ನು ಬೆಳೆಸಿಕೊಳ್ಳುವುದರ ಜೊತೆಗೆ ಸಮಯವನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಶಿಕ್ಷಣ ತಜ್ಞ ಎ.ಎಚ್. ಸಾಗರ್ ವಿದ್ಯಾರ್ಥಿಗಳಿಗೆ ಪರೀಕ್ಷೆ ಎದುರಿಸವ ಬಗೆ ಹೇಗೆ ಎಂಬುದರ ಕುರಿತು ತರಬೇತಿ ನೀಡಿದರು. ಹಾಸನ ನಗರ ಸೇರಿದಂತೆ ತಾಲೂಕು ವ್ಯಾಪ್ತಿಯ ಸುಮಾರು 1700ಕ್ಕೂ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಶಾಲಾ ಶಿಕ್ಷಣ ಇಲಾಖೆಯ ಜಿಲ್ಲಾ ಉಪ ನಿರ್ದೇಶಕ ಕೆ.ಎನ್. ಬಲರಾಮ್, ಹಾಸನ ತಾಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ರಂಗನಾಥ್, ರೋಟರಿ ಜೋನ್ 9 ಸಹಾಯಕ ಗವರ್ನರ್ ಜೆ.ಎನ್. ಮಂಜುನಾಥ್, ವಲಯ ಸೇನಾನಿ ಮಮತಾ ಪಾಟೀಲ್, ರೋಟರಿ ಕ್ಲಬ್ ಆಫ್ ಹಾಸನ ರಾಯಲ್ ಅಧ್ಯಕ್ಷ ಟೈಮ್ ಗಂಗಾಧರ್, ಕಾರ್ಯದರ್ಶಿ ರವಿ ಕುಮಾರ್ ಪಿ., ಖಜಾಂಚಿ ದಿಲೀಪ್ ಕುಮಾರ್ ಎಚ್.ಕೆ., ಕಾರ್ಯಕ್ರಮ ಮುಖ್ಯಸ್ಥ ಯೋಗೀಶ್ ಎಸ್. ಹಾಗೂ ರೋಟರಿ ಕ್ಲಬ್ ಎಲ್ಲಾ ಸದಸ್ಯರು ಹಾಜರಿದ್ದರು.

# ಇತಿಹಾಸದಲ್ಲಿ ಈ ದಿನ

## ಜನವರಿ-24

1848: ಕ್ಯಾಲಿಫೋರ್ನಿಯಾದಲ್ಲಿ ಚಿನ್ನದ ಗಣಿಗಳು ಪತ್ತೆಯಾಗಿ ಜಿಗೋಲ್ಡ್ ರಷ್‌ಟಿ ಆರಂಭವಾಯಿತು.

1908: ರಾಬರ್ಟ್ ಬ್ಯಾಡನ್ ಪಾವೆಲ್ ಅವರು ಬ್ರಿಟನ್‌ನಲ್ಲಿ ಮೊದಲ ಸ್ಕೌಟ್ ಚಳವಳಿ ಆರಂಭಿಸಿದರು.

1918: ರಷ್ಯಾ ಗ್ರೆಗೋರಿಯನ್ ಕ್ಯಾಲೆಂಡರ್ ಅನ್ನು ಅಧಿಕೃತವಾಗಿ ಅಳವಡಿಸಿಕೊಂಡಿತು.

1942: ದ್ವಿತೀಯ ಮಹಾಯುದ್ಧದ ಸಂದರ್ಭದಲ್ಲಿ ಜಪಾನ್ ಸೇನೆ ಬರ್ಮಾ (ಮ್ಯಾನ್ಮಾರ್) ಮೇಲೆ ದಾಳಿ ನಡೆಸಿತು.

1966: ಭಾರತ ಮತ್ತು ಪಾಕಿಸ್ತಾನ ನಡುವೆ ತಾಶ್ಕೆಂಟ್ ಒಪ್ಪಂದಕ್ಕೆ ಸಹಿ ಹಾಕಲಾಯಿತು.

2000: ಭಾರತದ ಸುಪ್ರೀಂ ಕೋರ್ಟ್ ಪರಿಸರ ಸಂರಕ್ಷಣೆಗೆ ಸಂಬಂಧಿಸಿದ ಮಹತ್ವದ ತೀರ್ಪು ನೀಡಿತು.

### ಜನನ

1950: ನಾಸಿರುದ್ದೀನ್ ಶಾ, ಪ್ರಸಿದ್ಧ ಭಾರತೀಯ ನಟ

### ಮರಣ

1966: ಲಾಲ್ ಬಹಾದುರ್ ಶಾಸ್ತ್ರಿ, ಭಾರತದ ಎರಡನೇ ಪ್ರಧಾನಮಂತ್ರಿ

1986: ಚಂದ್ರಶೇಖರ್ ವೆಂಕಟ ರಾಮನ್ (ಸಿ.ವಿ.ರಾಮನ್), ನೋಬೆಲ್ ಪ್ರಶಸ್ತಿ ವಿಜೇತ ವಿಜ್ಞಾನಿ

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248